# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 827
ಉತ್ತರಿಸಬೇಕಾದ ದಿನಾಂಕ : 13.03.2025
ಸದಸ್ಯರ ಹೆಸರು : ಶ್ರೀ ಸಿ.ಟಿ. ರವಿ
(ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಯವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಚಿಕ್ಕಮಗಳೂರು ಜಿಲ್ಲಾ ಕೇಂದ್ರದಲ್ಲಿ ಸಿಂಥೆಟಿಕ್ ಟ್ರ್ಯಾಕ್ ನಿರ್ಮಾಣ ಮಾಡುವ ಕಾಮಗಾರಿಗೆ ಅನುದಾನ ಮಂಜೂರಾಗಿದ್ದು ಯಾವಾಗ; ಯಾವ ಯೋಜನೆಯಡಿ ಎಷ್ಟು ಅನುದಾನ ಮಂಜೂರಾಗಿತ್ತು; | ಖೇಲೋ ಇಂಡಿಯಾ ಯೋಜನೆಯಡಿ ಜಿಲ್ಲಾ ಶತಮಾನೋತ್ಸವ ಕ್ರೀಡಾಂಗಣದಲ್ಲಿ ಸಿಂಥೆಟಿಕ್ ಅಥ್ಲೆಟಿಕ್ ಟ್ರ್ಯಾಕ್ ನಿರ್ಮಾಣ ಮಾಡಲು ಕೇಂದ್ರ ಸರ್ಕಾರದಿಂದ ದಿನಾಂಕ:05-11-2020 ರಂದು ರೂ.700.00 ಲಕ್ಷಗಳಿಗೆ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ನಿಯಮಾನುಸಾರ ಟೆಂಡರ್ ಆಹ್ವಾನಿಸಿ, ದಿನಾಂಕ:01.10.2021ರಂದು ರೂ.674.44 ಲಕ್ಷಗಳಿಗೆ ಕಾರ್ಯಾದೇಶ ನೀಡಲಾಗಿರುತ್ತದೆ. |
| ಆ) | ಕಾಮಗಾರಿ ಪ್ರಾರಂಭಗೊಂಡಿದ್ದು ಯಾವಾಗ;<br><br>ಕಾಮಗಾರಿ ಯಾವಾಗ ಪೂರ್ಣಗೊಳ್ಳಬೇಕಾಗಿತ್ತು; | ಸದರಿ ಕಾಮಗಾರಿಯನ್ನು ದಿನಾಂಕ:04-10-2021 ರಂದು ಪ್ರಾರಂಭಿಸಲಾಗಿರುತ್ತದೆ.<br>ಟೆಂಡರ್ ನಿಯಮದಂತೆ ಈ ಕಾಮಗಾರಿಯು ಒಂಭತ್ತು ತಿಂಗಳಲ್ಲಿ ಪೂರ್ಣಗೊಳ್ಳಬೇಕಾಗಿರುತ್ತದೆ. |
| ಇ) | ಈ ಕಾಮಗಾರಿ ಪ್ರಾರಂಭವಾಗಿ ಸ್ಥಗಿತಗೊಂಡಿರುವುದರಿಂದ ಕ್ರೀಡಾಂಗಣ ಉಪಯೋಗಕ್ಕೆ ಬಾರದೆ ಕ್ರೀಡಾಪಟುಗಳಿಗೆ ಹಾಗೂ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;<br>ಬಂದಿದ್ದರೆ, ಕಾಮಗಾರಿ ಪೂರ್ಣಗೊಳಿಸಲು ಇರುವ ತೊಡಕುಗಳೇನು; | ಹೌದು<br><br>ಗುತ್ತಿಗೆದಾರರು ಕಾಮಗಾರಿಯನ್ನು ಆರಂಭಿಸಿ, ಹಳೆಯ ಟ್ರ್ಯಾಕ್ ತೆಗೆದುಹಾಕಿ, ಚರಂಡಿ ಕಾಮಗಾರಿ ಕೈಗೊಳ್ಳುವ ಹಂತದಲ್ಲಿ ಕಾಮಗಾರಿ ನಿಲ್ಲಿಸಿರುತ್ತಾರೆ. ನೋಟೀಸ್ ನೀಡಿದ್ದಾಗ್ಯೂ ಕಾಮಗಾರಿ ಪುನರಾರಂಭಿಸಿರುವುದಿಲ್ಲ. ಆದುದರಿಂದ, ನಿಯಮಾನುಸಾರ ಗುತ್ತಿಗೆಯನ್ನು ರದ್ದುಪಡಿಸಿ, ಗುತ್ತಿಗೆದಾರರನ್ನು ಕಪ್ಪುಪಟ್ಟಿಗೆ ಸೇರಿಸಲಾಗಿದೆ. ಕಾಮಗಾರಿ ವಿಳಂಭವಾದ ಹಿನ್ನೆಲೆಯಲ್ಲಿ ದರಗಳಲ್ಲಿ ಬದಲಾವಣೆಯಾಗಿದ್ದು, ಪರಿಷ್ಕೃತ ಅಂದಾಜು ಪಟ್ಟಿಯನ್ನು ತಯಾರಿಸಿ, ಹೆಚ್ಚುವರಿ ವೆಚ್ಚಕ್ಕೆ ಆಡಳಿತಾತ್ಮಕ ಅನುಮೋದನೆಯನ್ನು ಪಡೆದು, ನಿಯಮಾನುಸಾರ ಟೆಂಡರ್ ಆಹ್ವಾನಿಸಿ, ಬಾಕಿ ಕಾಮಗಾರಿಗಳನ್ನು ಪೂರ್ಣಗೊಳಿಸಬೇಕಾದ ಹಿನ್ನೆಲೆಯಲ್ಲಿ, ಕಾಮಗಾರಿ ಸಕಾಲದಲ್ಲಿ ಪೂರ್ಣಗೊಳಿಸಲು ಸಾಧ್ಯವಾಗಿರುವುದಿಲ್ಲ. |

| | | |
|---|---|---|
| ಈ) | ಸದರಿ ಕಾಮಗಾರಿಗೆ ಈವರೆಗು ಎಷ್ಟು ಅನುದಾನ ವೆಚ್ಚ ಮಾಡಲಾಗಿದೆ; ಎಷ್ಟು ಹಣ ಉಳಿದಿದೆ;<br><br>ಈ ಕಾಮಗಾರಿಗೆ ಹೆಚ್ಚುವರಿ ಅನುದಾನದ ಅಗತ್ಯವಿದೆಯೆ; | • ಲೋಕೋಪಯೋಗಿ ಇಲಾಖೆ, ಚಿಕ್ಕಮಗಳೂರು ಇವರಿಗೆ ಬಿಡುಗಡೆ ಮಾಡಲಾದ ರೂ.337.22 ಲಕ್ಷಗಳ ಅನುದಾನದಲ್ಲಿ ರೂ.44.97 ಲಕ್ಷಗಳ ವೆಚ್ಚ ಭರಿಸಲಾಗಿದ್ದು, ರೂ.292.25 ಲಕ್ಷಗಳ ಅನುದಾನವು ಉಳಿದಿರುತ್ತದೆ.<br><br>ಹೆಚ್ಚುವರಿ ಅನುದಾನ ಅಗತ್ಯವಿರುತ್ತದೆ. |
| ಉ) | ಇದ್ದಲ್ಲಿ ಈ ಕಾಮಗಾರಿಗೆ ಅಗತ್ಯವಿರುವ ಹೆಚ್ಚುವರಿ ಅನುದಾನವನ್ನು ಬಿಡುಗಡೆ ಮಾಡಿ ಯಾವ ಕಾಲಮಿತಿಯಲ್ಲಿ ಕಾಮಗಾರಿ ಪೂರ್ಣಗೊಳಿಸಲಾಗುವುದು? (ವಿವರ ಒದಗಿಸಿ) | ಲೋಕೋಪಯೋಗಿ ಇಲಾಖೆ, ವಿಭಾಗ-1, ಚಿಕ್ಕಮಗಳೂರು ಇವರು ಚಾಲ್ತಿಯಲ್ಲಿರುವ ದರಪಟ್ಟಿಯ ದರಗಳನ್ವಯ ರೂ.749.00 ಲಕ್ಷಗಳಿಗೆ ವಿವರವಾದ ಪರಿಷ್ಕೃತ ಅಂದಾಜು ಪಟ್ಟಿಯನ್ನು ಸಿದ್ದಪಡಿಸಿದ್ದು, ಇದು ಕಾರ್ಯಾದೇಶ ಮೊತ್ತಕ್ಕಿಂತ ರೂ.119.53 ಲಕ್ಷ ಹೆಚ್ಚುವರಿಯಾಗಿರುತ್ತದೆ. ಅನುದಾನದ ಲಭ್ಯತೆ ಆಧರಿಸಿ, ಅಗತ್ಯ ಹೆಚ್ಚುವರಿ ಅನುದಾನವನ್ನು ಒದಗಿಸುವ ಬಗ್ಗೆ ಪರಿಶೀಲಿಸಿ, ಮುಂದಿನ ಕ್ರಮವಹಿಸಲಾಗುವುದು. |

ವೈಎಸ್ ಡಿ-ಇಬಿಬಿ/42/2025

**(ಸಿದ್ದರಾಮಯ್ಯ)**
ಮುಖ್ಯಮಂತ್ರಿ